**ದಿನಾಂಕ: 19.02.2022 ರಂದು ವಾರ್ಡ್ ಸಂಖ್ಯೆ 184 ಉತ್ತರಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.**

**ಹಾಜರಿದ್ದ ಅಧಿಕಾರಿಗಳು:-**

1. ಶ್ರೀ ಡಿ.ಸುಂದರಯ್ಯ– ವಾರ್ಡ್ ಸಮಿತಿ ನೋಡಲ್ ಅಧಿಕಾರಿ
2. ಶ್ರೀ ವೆಂಕಟರಮಣ.ಕೆ.ವಿ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ವಾರ್ಡ್ 184ಉತ್ತರಹಳ್ಳಿ)
3. ಶ್ರೀ ಮೇಘಶ್ರೀ.ವಿ – ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ
4. ಶ್ರೀ ಸಂಕೇತ್ ಕುಮಾರ್ – ಬೃಹತ್ ಮಳೆ ನೀರು ಗಾಲುವೆ, ಬೊಮ್ಮನಹಳ್ಳಿ
5. ಶ್ರೀ ವೆಂಕಟೇಶ್.ಕೆ – ಮೇಲ್ವಿಚಾರಕರು, ಘನತ್ಯಾಜ್ಯ ನಿರ್ವಹಣೆ
6. ಶ್ರೀ ಮೋಸಿಸ್ – ಮೇಲ್ವಿಚಾರಕರು, ಘನತ್ಯಾಜ್ಯ ನಿರ್ವಹಣೆ

**ಹಾಜರಿದ್ದ ಸಮಿತಿ ಸದಸ್ಯರು:-**

1. ಶ್ರೀ ಎಸ್.ಕೆ.ಸುದೀಂದ್ರ – ಪೂರ್ಣಪ್ರಜ್ಞಾ ಬಡಾವಣೆ RWA
2. ಶ್ರೀ ಅರುಣ್ – ಎ.ಜಿ.ಎಸ್ ಬಡಾವಣೆ RWA
3. ಶ್ರೀ ಅಮರ್.ಎಂ.ಆರ್ – ಎ.ಜಿ.ಎಸ್ ಬಡಾವಣೆ RWA

ಮೇಲೆ ಹಾಜರಿದ್ದ ಸಮಿತಿ ಸದಸ್ಯರ ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ವಾರ್ಡ್ ಸಮಿತಿ ನೋಡಲ್ ಅಧಿಕಾರಿಯಾದ ಶ್ರೀ ಡಿ.ಸುಂದರಯ್ಯ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು, ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಸದರಿ ಸಭೆಯಲ್ಲಿ ಈ ಕೆಳಕಂಡಂತೆ ವಿವಿಧ ವಿಷಯಗಳ ಬಗ್ಗೆ ವಾರ್ಡ್ ಸಮಿತಿಯು ವಿವರವಾಗಿ ಚರ್ಚಿಸಿದಂತೆ ಮುಂದಿನ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿ / ಇಲಾಖೆಗಳಿಗೆ ಸ್ರಚಿಸಲಾಗಿರುತ್ತದೆ.

1. **ಬೀದಿ ದೀಪಗಳಿಗೆ ಸಂಬಂಧಪಟ್ಟಂತೆ**

- ಎ.ಜಿ.ಎಸ್ ಬಡಾವಣೆಯಲ್ಲಿರುವ ವಿದ್ಯುತ್ ಕಂಬಕ್ಕೆ ಅಂಟಿಕೊಂಡಿರುವ ಮರದ ಕೊಂಬೆಗಳು ಹಾಗೂ ಬಳ್ಳಿಗಳನ್ನು ತೆರವುಗೊಳಿಸಲು ಕೋರಿರುತ್ತಾರೆ.
- ಪೂರ್ಣಪ್ರಜ್ಞಾ ಬಡಾವಣೆಯಲ್ಲಿ ಎಲ್.ಇ.ಡಿ ದೀಪಗಳನ್ನು ಅಳವಡಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಹಾಯಕ ಕಾರ್ಯಪಾಲಕ ಬೀದಿ ದೀಪ ರವರಿಗೆ ಸೂಚಿಸಿರುತ್ತಾರೆ.

2. **ಬೃಹತ್ ಮಳೆ ನೀರು ಗಾಲುವೆ ಇಲಾಖೆಗೆ ಸಂಬಂಧಪಟ್ಟಂತೆ**

- ಎ.ಜಿ.ಎಸ್ ಬಡಾವಣೆಯ ಬೃಹತ್ ಮಳೆ ನೀರು ಗಾಲುವೆ ಚರಂಡಿಯ ಕವರಿಂಗ್ ಸ್ಲ್ಯಾಬ್‌ಗಳನ್ನು ಅಳವಡಿಸಲು ಕೋರಿರುತ್ತಾರೆ.

ಈ ಬಗ್ಗೆ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಬೃಹತ್ ಮಳೆ ನೀರು ಗಾಲುವೆ ಬೊಮ್ಮನಹಳ್ಳಿ ವಲಯ ರವರಿಗೆ ಸೂಚಿಸಿರುತ್ತಾರೆ.

3. **ಬೆಂಗಳೂರು ನೀರು ಮತ್ತು ಒಳಚರಂಡಿ ಇಲಾಖೆಗೆ ಸಂಬಂಧಪಟ್ಟಂತೆ**

- ಎ.ಜಿ.ಎಸ್ ಬಡಾವಣೆಯ 16ನೇ ಮತ್ತು 17ನೇ ಮುಖ್ಯರಸ್ತೆಯಲ್ಲಿ ಹಾಳಾಗಿರುವ ಒಳಚರಂಡಿ ಪೈಪುಗಳನ್ನು ಪುನರ್ ಅಳವಡಿಸಲು ಕೋರಿರುತ್ತಾರೆ.
- ಪೂರ್ಣಪ್ರಜ್ಞಾ ಬಡಾವಣೆಯ 8ನೇ ಮತ್ತು 9ನೇ ಅಡ್ಡರಸ್ತೆಯಲ್ಲಿ ಮ್ಯಾನ್‌ಹೋಲ್‌ನಿಂದ ಒಳಚರಂಡಿ ನೀರು ಉಕ್ಕಿ ಹರಿಯುತ್ತಿದ್ದು, ಸರಿಪಡಿಸಲು ಕೋರಿರುತ್ತಾರೆ.

ಈ ಬಗ್ಗೆ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಂಗಳೂರು ಕುಡಿಯುವ ನೀರು ಮತ್ತು ಒಳಚರಂಡಿ ಮಂಡಳಿ ರವರಿಗೆ ಸೂಚಿಸಿರುತ್ತಾರೆ.

4. **ಘನತ್ಯಾಜ್ಯ ವಿಲೇವಾರಿ ಮತ್ತು ನಿರ್ವಹಣೆಗೆ ಸಂಬಂಧಪಟ್ಟಂತೆ**

- ಪೂರ್ಣ ಪ್ರಜ್ಞಾ ಬಡಾವಣೆಯ 35ನೇ, 37ನೇ, 40ನೇ ಮತ್ತು 41ನೇ ಅಡ್ಡರಸ್ತೆಯಲ್ಲಿ ಬಿದ್ದಿರುವ ಮರದ ಎಲೆಗಳನ್ನು ಸ್ವಚ್ಛಗೊಳಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ಹಾಗೂ ಆರೋಗ್ಯ ಪರಿವೀಕ್ಷಕರು ಘನತ್ಯಾಜ್ಯ ವಿಲೇವಾರಿ ಮತ್ತು ನಿರ್ವಹಣೆ ರವರಿಗೆ ಸೂಚಿಸಿರುತ್ತಾರೆ.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರಾದ ಶ್ರೀ ಡಿ.ಸುಂದರಯ್ಯ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಶ್ರೀ ಡಿ.ಸುಂದರಯ್ಯ
ನೋಡಲ್ ಅಧಿಕಾರಿ ಹಾಗೂ ಸ.ಕಾ.ನಿ.ಅ
ಆಂಜನಾಪುರ ಉಪವಿಭಾಗ

ಶ್ರೀ ವೆಂಕಟರಮಣ.ಕೆ.ವಿ
ಸಂಚಾಲಕರು ಹಾಗೂ ಸ.ಅ–184